# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 340

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸುವ ದಿನಾಂಕ : 18.02.2022.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಹಿರಿಯ ನಾಗರಿಕರಿಗೆ ಎಷ್ಟು ರಿಯಾಯಿತಿ ದರ ನೀಡಲಾಗುತ್ತಿದೆ. | ರಾಜ್ಯದ ನಾಲ್ಕೂ ಸಾರಿಗೆ ಸಂಸ್ಥೆಗಳಲ್ಲಿ 60 ಮತ್ತು ಅದಕ್ಕೂ ಹೆಚ್ಚಿನ ವಯಸ್ಸಿನ ರಾಜ್ಯದ ಹಿರಿಯ ನಾಗರಿಕರಿಗೆ ನಿಗಮದ ನಗರ / ಹೊರವಲಯ, ಸಾಮಾನ್ಯ, ವೇಗದೂತ, ಅರಸುವಿಹಾರಿ ವಜ್ರ ಮತ್ತು ರಾಜಹಂಸ ಬಸ್ಸುಗಳಲ್ಲಿ ಕರ್ನಾಟಕ ರಾಜ್ಯ ಮತ್ತು ಅಂತರ ರಾಜ್ಯ ಸಾರಿಗೆಗಳಲ್ಲಿ ಟಿಕೆಟ್ ದರದಲ್ಲಿ ಶೇ.25ರಷ್ಟು ಮತ್ತು ಮಾಸಿಕ ಬಸ್ ಪಾಸ್ ಮೇಲೆ ಶೇ.10ರಷ್ಟು ರಿಯಾಯಿತಿಯನ್ನು ಸಂಸ್ಥೆಯಿಂದ ನೀಡಲಾಗುತ್ತಿದೆ. |
| ಆ. | ಅದೇ ರೀತಿ ಐರಾವತ ಹಾಗೂ ಸ್ಲೀಪರ್ ಬಸ್‌ಗಳಲ್ಲಿ ಹಿರಿಯ ನಾಗರಿಕರಿಗೆ ರಿಯಾಯಿತಿ ದರ ನೀಡಲಾಗುವುದೆ; | ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ, ಕ.ಕ.ರ.ಸಾ.ನಿಗಮಗಳಲ್ಲಿ ಹಾಲಿ ನಿಯಮಾವಳಿಯನ್ವಯ ಐರಾವತ, ಸ್ಲೀಪರ್ ಬಸ್‌ಗಳಲ್ಲಿ ಹಾಗೂ ಪ್ರತಿಷ್ಠಿತ ಸಾರಿಗೆಗಳಲ್ಲಿ ಹಿರಿಯ ನಾಗರಿಕರಿಗೆ ರಿಯಾಯಿತಿ ನೀಡುವ ಕುರಿತು ಪರಿಶೀಲಿಸಲಾಗುತ್ತಿದೆ. |

ಸಂಖ್ಯೆ: ಟಿಡಿ 25 ಟಿಸಿಕ್ಯೂ 2022

(ಬಿ.ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು